# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಜಂಟಿ ನಿರ್ದೇಶಕರು (ನಗರ ಯೋಜನೆ-ಉತ್ತರ) ನಂ. CC/32/19-20 ದಿನಾಂಕ. 19/6/19 ಬೆಂಗಳೂರು ★ ಬೃಹತ್ ಬೆಂಗಳೂರು ಮಹಾನಗರ

ಸಂಖ್ಯೆ: JDTP(N)/LP/25/2010-11 ದಿನಾಂಕ: 19-06-2019

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 6/2, ವಾರ್ಡ್ ನಂ. 05, ಚೊಕ್ಕನಹಳ್ಳಿ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 5 ರ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 14-05-2019.
2) ನಕ್ಷೆ ಮಂಜೂರಾತಿ ಸಂಖ್ಯೆ: JDTP(N)/LP/25/2010-11, ದಿನಾಂಕ: 18-06-2018.

* * * * * * *

ಆಸ್ತಿ ಸಂಖ್ಯೆ. 6/2, ವಾರ್ಡ್ ನಂ. 05, ಚೊಕ್ಕನಹಳ್ಳಿ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 5 ರಲ್ಲಿನ 3ತಳ+ನೆಲ+ಮೇಲಿನ 18 ಅಂತಸ್ತುಗಳ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 18-06-2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 21-05-2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 07-06-2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. **8,73,000/-** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000129 ದಿನಾಂಕ: 19-06-2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ಬಿಲ್ಡಿಂಗ್ – 5 ರ ವಾಣಿಜ್ಯ (ಕಛೇರಿ) ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಗಳೂರು

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

ಮೆ॥ ಭಾರತೀಯ ಸಿಟಿ ಡೆವಲಪರ್ಸ್ ಪ್ರೈ.ಲಿ.,
ನಂ.1/5, ಪ್ಯಾಲೇಸ್ ರಸ್ತೆ,
ಬೆಂಗಳೂರು – 560001.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddai 19/6/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

19/6/19 19/6/19 19/6/19